# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ | KANNADA POST | ಇದು ಸುದ್ದಿ ವಿಳಾಸ | ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 158 | Pages. 2 | Date: 30-05-2026, SATURDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 158 - ಪುಟಗಳು : 2 | 30-05-2026 | ಶನಿವಾರ | Ph: 8762954248 | ದರ : ₹1


## ತೊಟ್ಟಿಮನೆ ಹೋಂಸ್ಟೇ ವಿರುದ್ಧ ಕ್ರಮಕ್ಕೆ ಆಗ್ರಹ

### ಅಕ್ರಮ ಚಟುವಟಿಕೆಗಳ ಕಡಿವಾಣಕ್ಕೆ ಹಿಂದೂ ಹಿತರಕ್ಷಣಾ ವೇದಿಕೆ ಮನವಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ತಾಲೂಕಿನ ಆನೆಮಹಲ್ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಚಿಕ್ಕಸತ್ತಿಗಾಲ ಗ್ರಾಮದಲ್ಲಿರುವ ತೊಟ್ಟಿಮನೆ ಹೋಂಸ್ಟೇನಲ್ಲಿ ಪರವಾನಗಿ ಇಲ್ಲದೆ ಚಟುವಟಿಕೆ ನಡೆಸಲಾಗುತ್ತಿದ್ದು, ವಿವಿಧ ಅಕ್ರಮ ಚಟುವಟಿಕೆಗಳು ನಡೆಯುತ್ತಿವೆ ಎಂದು ಆರೋಪಿಸಿ ತಕ್ಷಣ ತನಿಖೆ ನಡೆಸಿ ಕಾನೂನು ಕ್ರಮ ಕೈಗೊಳ್ಳುವಂತೆ ಹಿಂದೂ ಹಿತರಕ್ಷಣಾ ವೇದಿಕೆ ಉಪವಿಭಾಗಾಧಿಕಾರಿಗಳಿಗೆ ಮನವಿ ಸಲ್ಲಿಸಿದೆ.




ವೇದಿಕೆ ಮುಖಂಡ ರಘು ಸಕಲೇಶಪುರ ನೇತೃತ್ವದಲ್ಲಿ ಸಲ್ಲಿಸಿದ ಮನವಿಯಲ್ಲಿ, ಹೋಂಸ್ಟೇ ಮಾಲೀಕ ಸಯ್ಯದ್ ಮುಫೀಜ್ ಪಾಷಾ ಅವರು ಅಗತ್ಯ ಪರವಾನಗಿ ಪಡೆಯದೇ ಹೋಂಸ್ಟೇ ನಡೆಸುತ್ತಿದ್ದಾರೆ ಎಂದು ಆರೋಪಿಸಲಾಗಿದೆ.

ಹೋಂಸ್ಟೇನಲ್ಲಿ ಅಕ್ರಮ ಜೂಜಾಟ (ಇಸ್ಪೀಟ್), ಮಾದಕ ವಸ್ತುಗಳ ಬಳಕೆ, ವೇಶ್ಯಾವಾಟಿಕೆ ಸೇರಿದಂತೆ ಕಾನೂನುಬಾಹಿರ ಚಟುವಟಿಕೆಗಳು ನಡೆಯುತ್ತಿವೆ. ಅಲ್ಲದೆ ಗೋವುಗಳನ್ನು ಅಕ್ರಮವಾಗಿ ಕಟ್ಟಿ ಹಾಕಿ ವಧೆ ಮಾಡಿ ಮಾಂಸ ಮಾರಾಟ ನಡೆಸಲಾಗುತ್ತಿದೆ ಎಂಬ ಗಂಭೀರ ಆರೋಪವನ್ನೂ ಮನವಿಯಲ್ಲಿ ಮಾಡಲಾಗಿದೆ.

ಆನೆಮಹಲ್ ಗ್ರಾಮ ಪಂಚಾಯಿತಿಯಿಂದ ಯಾವುದೇ ಅಧಿಕೃತ ಅನುಮತಿ ಪಡೆಯದೇ ರಾಜಕೀಯ ಪ್ರಭಾವ ಬಳಸಿಕೊಂಡು ಹೋಂಸ್ಟೇ ನಡೆಸಲಾಗುತ್ತಿದೆ. ಈ ಕುರಿತು ಸ್ಥಳೀಯರು ಮತ್ತು ಅಧಿಕಾರಿಗಳಿಗೆ ಬೆದರಿಕೆ ಹಾಕಲಾಗುತ್ತಿದ್ದು, ಸಮಗ್ರ ತನಿಖೆ ನಡೆಸಬೇಕು ಎಂದು ಒತ್ತಾಯಿಸಲಾಗಿದೆ.

ಸಾಕ್ಷ್ಯ ನಾಶವಾಗುವ ಸಾಧ್ಯತೆ ಇರುವುದರಿಂದ ಮೊದಲು ಹೋಂಸ್ಟೇಗೆ ಬೀಗಮುದ್ರೆ ಹಾಕಿ ಬಳಿಕ ತನಿಖೆ ನಡೆಸಬೇಕು. ತಪ್ಪು ಸಾಬೀತಾದಲ್ಲಿ ಸಂಬಂಧಪಟ್ಟವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಿ, ಪರವಾನಗಿ ಇಲ್ಲದೆ ಹೋಂಸ್ಟೇ ನಡೆಸಿದ ಹಿನ್ನೆಲೆಯಲ್ಲಿ ದಂಡ ವಿಧಿಸಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ಉಪವಿಭಾಗಾಧಿಕಾರಿಗಳು ಈ ಕುರಿತು ಸೂಕ್ತ ತನಿಖೆ ನಡೆಸಿ ಅಗತ್ಯ ಕ್ರಮ ಕೈಗೊಳ್ಳುವಂತೆ ಹಿಂದೂ ಹಿತರಕ್ಷಣಾ ವೇದಿಕೆ ಒತ್ತಾಯಿಸಿದೆ.

ಈ ಸಂದರ್ಭದಲ್ಲಿ ಹಿಂದೂ ಹಿತರಕ್ಷಣಾ ವೇದಿಕೆ ಅಧ್ಯಕ್ಷರಾದ ಮಂಜುನಾಥ, ಜಿಲ್ಲಾ ಸಂಚಾಲಕ ಕೌಶಿಕ್, ಪ್ರದೀಪ್ ಪೂಜಾರಿ, ದುಷ್ಯಂತ್ ಗೌಡ, ಶೇಖರ್ ಕಬ್ಬಿನಗದ್ದೆ, ಶಶಿ ನಡೆಹಳ್ಳಿ, ವಿಜಿ ಗುರ್ಜನಹಳ್ಳಿ, ಸುಪ್ರೀತ್ ಹರೀಶ್ವಿವು ಜಿಪ್ಪಿ ಮಹಿಳಾ ಘಟಕದ ಮಂಜುಶ್ರೀ ಪ್ರದೀಪ್, ನಿರ್ಮಲ ಭಟ್, ಗೌರಮ್ಮ.ಗಾಯತ್ರಿ ರಾಜೇಶ್ ಬಿಜೆಪಿ ಮುಖಂಡ ಶಿವಕುಮಾರ್ ಮೆಣಸಮಕ್ಕಿ , ರಾಕಿ ಬಾಗೆ ಬಗೆ, ಶೇಖರ್ ಸಿದ್ದಾಪುರ ಆರ್‌ಎಸ್‌ಎಸ್ ಮುಖಂಡ ಆಟೋ ರವಿ ಬಿಜೆಪಿ ಅಧ್ಯಕ್ಷ ಲೋಕಿ ಬಾಳೆಗದ್ದೆ ನಂದೀಶ್ವರ ಸಮಿತಿ ಉಮಾಪತಿ, ದೂಷಿ,ಅಕ್ಷತ್ ಭಟ್ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

## ಮಹಿಳೆ ಅನುಮಾನಾಸ್ಪದ ಸಾವು

### ಕೊಲೆ ಆರೋಪ : ಪತಿ ಎಸ್ಕೇಪ್

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಬಕ್ರೀದ್ ಹಬ್ಬದ ದಿನವೇ ಮಹಿಳೆಯೊಬ್ಬರು ಅನುಮಾನಸ್ಪದವಾಗಿ ಸಾವನ್ನಪ್ಪಿರುವ ಘಟನೆ ಪಟ್ಟಣದ ಕಂಚಗಾರ ಬೀದಿಯಲ್ಲಿ ಗುರುವಾರ ನಡೆದಿದೆ.



ಗುಲ್ಶರ್ ಭಾನು (33) ಸಾವನ್ನಪ್ಪಿರುವ ಗೃಹಿಣಿ. ಪತ್ನಿಯನ್ನು ಪತಿ ಸಹೀಬು (35) ಎಂಬಾತನೇ ಕೊಲೆ ಮಾಡಿದ್ದಾನೆ ಎಂದು ಮೃತೆ ಕುಟುಂಬ ಸದಸ್ಯರು ಆರೋಪಿಸಿದ್ದಾರೆ.

ಕಳೆದ ಹನ್ನೆರಡು ವರ್ಷಗಳ ಹಿಂದೆ ಗುಲ್ಶರ್‌ಬಾನು ಹಾಗೂ ಸಹೀಬು ವಿವಾಹವಾಗಿದ್ದರು. ಇಬ್ಬರು ಮಕ್ಕಳಿದ್ದರೂ, ತವರು ಮನೆಯಿಂದ ಹಣ ತರುವಂತೆ ಪತಿ, ಪತ್ನಿಯನ್ನು ಪದೇ ಪೇ ಪೀಡಿಸುತ್ತಿದ್ದ ಎನ್ನಲಾಗಿದೆ.

ಈ ನಡುವೆ ಹಣಕ್ಕಾಗಿಯೇ ಎರಡು ಮಕ್ಕಳನ್ನು ಮಾರಾಟ ಮಾಡಿರುವ ಗಂಭೀರ ಆರೋಪ ಸಹ ಕೇಳಿ ಬಂದಿದೆ.

ಈ ನಡುವೆ ಬಕ್ರೀದ್ ಹಬ್ಬದ ದಿನದಂದೇ ಮನೆಯಲ್ಲಿಯೇ ಗುಲ್ಶರ್‌ಬಾನು ಸಾವನ್ನಪ್ಪಿರುವುದು ಸಾಕಷ್ಟು ಅನುಮಾನಗಳಿಗೆ ಎಡೆ ಮಾಡಿಕೊಟ್ಟಿದೆ. ಏತನ್ಮಧ್ಯೆ ಘಟನೆ ನಂತರ ಪತಿ ಸಹೀಬು ಎಸ್ಕೇಪ್ ಆಗಿದ್ದಾರೆ. ಸ್ಥಳಕ್ಕೆ ನಗರ ಠಾಣೆ ಇನ್ಸ್‌ಪೆಕ್ಟರ್ ರಘುಪತಿ ಹಾಗೂ ಸಿಬ್ಬಂದಿ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ಸಂಬಂಧ ಪ್ರಕರಣ ದಾಖಲಿಸಿ ತನಿಖೆ ಕೈಗೊಳ್ಳಲಾಗಿದೆ.

ಮೃತದೇಹವನ್ನು ಹಾಸನದ ಹಿಮ್ಸ್ ಆಸ್ಪತ್ರೆಗೆ ಕೊಂಡೊಯ್ದು, ಮರಣೋತ್ತರ ಪರೀಕ್ಷೆ ನಡೆಸಿದ ನಂತರ ವಾರಸುದಾರರಿಗೆ ಒಪ್ಪಿಸಲಾಗಿದೆ.

## ಮೇ 31 ರಂದು ಸ್ವಾತಂತ್ರ್ಯದ ಓಟ ನಾಟಕ ಪ್ರದರ್ಶನ : ಚಲಂ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಆಶ್ರಯದಲ್ಲಿ ರಂಗಾಯಣ ಶಿವಮೊಗ್ಗ ಪ್ರಸ್ತುತ ಪಡಿಸುವ ಖ್ಯಾತ ಸಾಹಿತಿ ಬೊಳುವಾರು ಮಹಮ್ಮದ್ ಕುಂಞ

ಅವರ ಪ್ರಸಿದ್ಧ ಕಾದಂಬರಿ ಆಧಾರಿತ ಸ್ವಾತಂತ್ರ್ಯದ ಓಟ ನಾಟಕವನ್ನು ಮೇ 31ರಂದು ಭಾನುವಾರ ಸಂಜೆ 5.30ಕ್ಕೆ ನಗರದ ಹಾಸನಾಂಬ ಕಲಾಕ್ಷೇತ್ರದಲ್ಲಿ

ಪ್ರದರ್ಶಿಸಲಾಗುತ್ತಿದೆ ಎಂದು ರಂಗಕರ್ಮಿಕ ಚಲಂ ಹಾಡ್ಲಹಳ್ಳಿ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಶುಕ್ರವಾರ ಮಾತನಾಡಿ, ಸಾಮಾಜಿಕ ಮೌಲ್ಯಗಳು, ಸ್ವಾತಂತ್ರ್ಯದ ಅರ್ಥ, ವ್ಯಕ್ತಿಯ ಅಂತರಂಗದ ಸಂಘರ್ಷಗಳು ಹಾಗೂ ಸಮಕಾಲೀನ ಬದುಕಿನ ವೈವಿಧ್ಯಮಯ ಆಯಾಮಗಳನ್ನು ಒಳಗೊಂಡಿರುವ ಈ ನಾಟಕವು ಪ್ರೇಕ್ಷಕರ ಮನಸಿಗೆ ಹತ್ತಿರವಾಗುವಂತಿದೆ ಎಂದರು.

ಹಿರಿಯ ರಂಗಕರ್ಮಿ ನಟರಾಜ್ ಹೊನ್ನವಳ್ಳಿ ರಂಗಪಠ್ಯ ವಿನ್ಯಾಸ ಹಾಗೂ ನಿರ್ದೇಶನ ಮಾಡಿದ್ದು, ಮಂಜುನಾಥ್ ಗೋಮಾರದಹಳ್ಳಿ ಕಾದಂಬರಿಯನ್ನು ರಂಗರೂಪಕ್ಕೆ ತಂದಿದ್ದಾರೆ. ಸಲಾಮ್ ದಂಡಿನ್ ಸಹ ನಿರ್ದೇಶನ ಜವಾಬ್ದಾರಿ ನಿರ್ವಹಿಸಿದ್ದು, ರಾಘವ ಕಮ್ಮಾರ ಸಂಗೀತ ಸಂಯೋಜನೆ ಮಾಡಿದ್ದಾರೆ.

ರಂಗಸಜ್ಜಿಕೆಯನ್ನು ಮಧುಸೂಧನ್, ರಮೇಶ್ ಎಸ್.ಮೈಸೂರು, ಶಂಕರ್ ಕೆ.ಬೆಳಲಕಟ್ಟೆ ರಂಗಸಜ್ಜಿಗೆ ನಿರ್ಮಾಣ ಮಾಡಿದ್ದಾರೆ. ಸಹನಾ ಪಿಂಜರ್ ವಸ್ತ್ರ ವಿನ್ಯಾಸ ಮಾಡಿದ್ದು, ಪಾತ್ರಗಳಿಗೆ ಜೀವಂತಿಕೆ ನೀಡುವ ರೀತಿಯಲ್ಲಿ ವಿನ್ಯಾಸ ರೂಪಿಸಲಾಗಿದೆ ಎಂದರು.

ಒಟ್ಟು 1111 ಪುಟಗಳ ಕುಂಞ ಅವರ ಪುಸ್ತಕಕ್ಕೆ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಸಹ ಲಭಿಸಿದೆ. ವಲಸೆ ವಿಷಯವನ್ನು ನಾನಾ ಆಯಾಮಗಳಲ್ಲಿ ದಾಖಲಿಸಿದ್ದಾರೆ. 1949 ರಲ್ಲಿ ದೇಶ ವಿಭಜನೆಯಾದಾಗ ನೆಲಮಟ್ಟದ ಸಂಶೋಧನೆ ಮಾಡಿದ್ದಾರೆ. ಚಾಂದ್ ಅಲಿ ಎಂಬಾತ ಅನಿವಾರ್ಯವಾಗಿ ಭಾರತದ ಮುತ್ತಪ್ಪಾಡಿ ಎಂಬಲ್ಲಿ ನೆಲೆಸಿ ಕ್ರಮೇಣ ಭಾರತೀಯನೇ ಆಗುವುದನ್ನು ಕಟ್ಟಿಕೊಡಲಾಗಿದೆ ಎಂದರು. ಎಲ್ಲರಿಗೂ ನಾಟಕ ವೀಕ್ಷಣೆಗೆ ಉಚಿತ ಪ್ರವೇಶವಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಯಶಸ್ವಿಗೊಳಿಸುವಂತೆ ಮನವಿ ಮಾಡಿದರು.

ಸಾಹಿತಿ ಚಿನ್ನೇನಹಳ್ಳಿ ಸ್ವಾಮಿ ಮಾತನಾಡಿ, 35 ಮಂದಿ ಕಲಾವಿದರ ತಂಡ ವಿವಿಧ ಪಾತ್ರಗಳನ್ನು ನಿರ್ವಹಿಸುತ್ತಿದ್ದು, ಇದು ಸುಮಾರು ಮೂರೂವರೆ ಗಂಟೆಗಳ ನಾಟಕ ಭಾರತ-ಪಾಕ್ ವಿಭಜನೆ ನಂತರ ಏನೇಲ್ಲ ಆಯ್ತು ಎಂಬುದನ್ನು ನಾಟಕದಲ್ಲಿ ಕಟ್ಟಿಕೊಡಲಾಗಿದೆ. ಈ ನಾಟಕ ಎಲ್ಲರಿಗೂ ಮೆಚ್ಚುಗೆ ಆಗಲಿದೆ ಎಮದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ರಂಗಕರ್ಮಿ ಶಾದ್ರಕ್, ರಂಗ ಕಲಾವಿದೆ ಹಾಗೂ ನಟಿ ಪೂಜಾ ರಘುನಂದನ್ ಇತರರು ಉಪಸ್ಥಿತರಿದ್ದರು.

## ಸಿದ್ದರಾಮಯ್ಯ ಅಭಿವೃದ್ಧಿ ವಿಚಾರದಲ್ಲಿ ಶೂನ್ಯ

### ಡಿ.ಕೆ.ಶಿವಕುಮಾರ್ ಅವರು ಏನು ಕೊಡುಗೆ ಕೊಡ್ತಾರೆ ನೋಡೋಣ ಎಂದ ಸ್ವರೂಪ್

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ವಿಚಾರ ಅವರ ಪಕ್ಷಕ್ಕೆ ಸಂಬಂಧಪಟ್ಟಿದ್ದು, ಆದರೆ ಅವರ ಅವಧಿಯಲ್ಲಿ ಜಿಲ್ಲೆಗೆ ಯಾವುದೇ ಕೊಡುಗೆ ನೀಡಲಿಲ್ಲ, ನಾವು ಹಾಗು ಜಿಲ್ಲೆಯ ಜನರು ಇಟ್ಟುಕೊಂಡಿದ್ದ ನಿರೀಕ್ಷೆ ಹುಸಿಯಾಗಿದೆ ಎಂದು ಸ್ಥಳೀಯ ಶಾಸಕ ಹೆಚ್.ಪಿ.ಸ್ವರೂಪ್ ಪ್ರಕಾಶ್ ಬೇಸರ ಹೊರ ಹಾಕಿದರು.




ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಮೂರು ವರ್ಷ ತುಂಬಿದೆ. ಹಾಸನ ಜಿಲ್ಲೆಗೆ ಸಿದ್ದರಾಮಯ್ಯ ಅವರ ಕೊಡುಗೆ ಏನು ಅಂಥ ನಿಮಗೂ ಗೊತ್ತಿದೆ ಎಂದುರ. ಯಾರು ಮುಖ್ಯಮಂತ್ರಿ ಆದರೆ ನಮಗೇನು, ಜಿಲ್ಲೆಗೆ ಅದರಲ್ಲೂ ಹಾಸನ ವಿಧಾನಸಭಾ ಕ್ಷೇತ್ರಕ್ಕೆ ಹೆಚ್ಚಿನ ಅನುದಾನ ಕೊಟ್ಟರೆ ತುಂಬಾ ಸಂತೋಷ ಎಂದು ತಿಳಿಸಿದರು.

ಸಿಎಂ ಬದಲಾವಣೆ ಅವರ ಪಕ್ಷಕ್ಕೆ ಬಿಟ್ಟ ವಿಚಾರ. ಯಾರೇ ಮುಖ್ಯಮಂತ್ರಿ ಆದರೂ ಹಾಸನ ಜಿಲ್ಲೆಗೆ ಏನು ಸಂಬಂಧವಿಲ್ಲ, ಸಿದ್ದರಾಮಯ್ಯ ಅವರ ಮೇಲೆ ನಾವು ನಿರೀಕ್ಷೆ ಇಟ್ಟುಕೊಂಡಿದ್ದೆವು. ಆದರೆ ಹಾಸನ ಜಿಲ್ಲೆಗೆ ಸಿದ್ದರಾಮಯ್ಯ ಅವರ ಕೊಡುಗೆ ಶೂನ್ಯ ಎಂದು ಅಸಮಾಧಾನ ಹೊರ ಹಾಕಿದರು.

ಇದೀಗ ಡಿ.ಕೆ.ಶಿವಕುಮಾರ್ ಜಿಲ್ಲೆಗೆ ಯಾವ ರೀತಿ ಕೊಡುಗೆ ಕೊಡ್ತಾರೆ ನೋಡೋಣ, ನಮ್ಮ ಜೆಡಿಎಸ್ ಪಕ್ಷ ಅಧಿಕಾರದಲ್ಲಿದ್ದ ಸಂದರ್ಭದಲ್ಲಿ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ನಿರ್ಮಿಸಲಾಗಿದೆ. ಇದಲ್ಲದೆ ಇನ್ನೂ ಸಾಕಷ್ಟು ಅಭಿವೃದ್ಧಿ ಕೆಲಸ-ಕಾರ್ಯಗಳು ಆಗಿವೆ. ಡಿ.ಕೆ. ಶಿವಕುಮಾರ್ ಮುಖ್ಯಮಂತ್ರಿ ಆದ ಮೇಲೆ ಏನು ಕೊಡುಗೆ ನೀಡುತ್ತಾರೆ, ಯಾವ ರೀತಿ ಅಭಿವೃದ್ಧಿ ಮಾಡುತ್ತಾರೆ ಕಾದು ನೋಡೋಣ ಎಂದು ಹೇಳಿದರು. ಜಿಲ್ಲೆಯ ಅಭಿವೃದ್ಧಿಗೆ ಹೆಚ್ಚಿನ ಅನುದಾನ, ಮೂಲಸೌಕರ್ಯ ಹಾಗೂ ಜನಪರ ಯೋಜನೆಗಳು ಬರಬೇಕು. ಅದನ್ನು ನೀಡುವ ನಾಯಕನೇ ಜನರಿಗೆ ಮುಖ್ಯ ಎಂದು ಹೇಳಿದರು.

ಈ ವೇಳೆ ಕಾಂಗ್ರೆಸ್ ಸರ್ಕಾರದ ಅಭಿವೃದ್ಧಿ ಕಾರ್ಯ ಕುರಿತು ಪ್ರಶ್ನಿಸಿದ ಶಾಸಕರು, ಜೆಡಿಎಸ್ ಆಡಳಿತದಲ್ಲಿ ಹಾಸನ ಜಿಲ್ಲೆಗೆ ಅನೇಕ ಪ್ರಮುಖ ಯೋಜನೆಗಳು ಮಂಜೂರಾಗಿದ್ದವು. ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಸೇರಿದಂತೆ ಹಲವು ಅಭಿವೃದ್ಧಿ ಕಾಮಗಾರಿಗಳಿಗೆ ನಾವು ಅಡಿಪಾಯ ಹಾಕಿದ್ದೇವೆ. ಆದರೆ ಉದ್ಘಾಟನೆ ಮಾಡುವ ವೇಳೆ ಮಾತ್ರ, ಕಾಂಗ್ರೆಸ್ ನಾಯಕರು ಮುಂದೆ ಬರುತ್ತಾರೆ ಎಂದು ವ್ಯಂಗ್ಯ ವಾಡಿದರು. ಜಿಲ್ಲೆಯ ಜನರಿಗೆ ರಾಜಕೀಯ ಪೈಪೋಟಿಗಿಂತ ಅಭಿವೃದ್ಧಿಯೇ ಮುಖ್ಯ. ಹಾಸನ ಜಿಲ್ಲೆ ರಾಜ್ಯದಲ್ಲಿ ರಾಜಕೀಯವಾಗಿ ಪ್ರಮುಖ ಸ್ಥಾನ ಹೊಂದಿದ್ದರೂ, ಆಳುವ ಸರ್ಕಾರಗಳು ನಿರೀಕ್ಷಿತ ಪ್ರಮಾಣದಲ್ಲಿ ಜಿಲ್ಲೆಯತ್ತ ಗಮನ ಸಿಗುತ್ತಿಲ್ಲ. ಮುಂದಿನ ದಿನಗಳಲ್ಲಿ ಜಿಲ್ಲೆಯ ಅಭಿವೃದ್ಧಿಗೆ ಯಾರು ನಿಜವಾಗಿ ಕೆಲಸ ಮಾಡುತ್ತಾರೆ ಎಂಬುದನ್ನು ಜನರು ಗಮನಿಸುತ್ತಿದ್ದಾರೆ ಎಂದು ಹೇಳಿದರು.

ಈ ವೇಳೆ ಮಹಾನಗರ ಪಾಲಿಕೆ ಮಾಜಿ ಸದಸ್ಯರಾದ ಹೆಚ್.ಎಸ್. ವಾಸುದೇವ್, ಸಿ.ಕ್ರಾಂತಿ ಪ್ರಸಾದ್ ತ್ಯಾಗಿ, ಗಿರೀಗೌಡ, ಬಿದರಿಕೆರೆ ಜಯರಾಮ್, ಜಿಲ್ಲಾ ಜೆಡಿಎಸ್ ವಕ್ತಾರ ಹೊಂಗೆರೆ ರಘು ಮೊದಲಾದವರಿದ್ದರು.

## ಶಿವಲಿಂಗೇಗೌಡ ಪರ ಶ್ರೇಯಸ್ ಬ್ಯಾಟಿಂಗ್

### ಕೆಎಂಶಿ ಮಂತ್ರಿ ಮಾಡಲು ಕೋರಿ ರಾಹುಲ್ ಗಾಂಧಿಗೆ ಪತ್ರ ಬರೆದ ಸಂಸದ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ನವದೆಹಲಿ/ಹಾಸನ: ಅರಸೀಕೆರೆ ಕ್ಷೇತ್ರದ ಹಿರಿಯ ಶಾಸಕ ಕೆ.ಎಂ. ಶಿವಲಿಂಗೇಗೌಡ ಅವರಿಗೆ ರಾಜ್ಯ ಸಚಿವ ಸಂಪುಟದಲ್ಲಿ ಸ್ಥಾನ ನೀಡಬೇಕು ಎಂದು ಒತ್ತಾಯಿಸಿ ಎಐಸಿಸಿ ನಾಯಕ ಹಾಗೂ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರಿಗೆ ಹಾಸನ ಸಂಸದ ಶ್ರೇಯಸ್ ಪಟೇಲ್ ಪತ್ರ ಬರೆದಿದ್ದಾರೆ.

ಇತ್ತೀಚೆಗೆ ನಡೆದ ಲೋಕಸಭಾ ಚುನಾವಣೆಯಲ್ಲಿ ಹಾಸನ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷದ ಗೆಲುವಿಗೆ ಶಿವಲಿಂಗೇಗೌಡರು ನೀಡಿದ ಅಪಾರ ಕೊಡುಗೆ ಮತ್ತು ಅವರ ರಾಜಕೀಯ ಹಿರಿತನವನ್ನು ಪರಿಗಣಿಸಿ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಸಂಸದರು ಹೈಕಮಾಂಡ್ ಮುಖಂಡರಲ್ಲಿ ಬಲವಾಗಿ ವಾದಿಸಿದ್ದಾರೆ.

#### ಹಾಸನ ಜಿಲ್ಲೆಯ ಏಕೈಕ ಕಾಂಗ್ರೆಸ್ ಮುಖ

ರಾಹುಲ್ ಗಾಂಧಿ ಅವರಿಗೆ ಬರೆದಿರುವ ಪತ್ರದಲ್ಲಿ ಶ್ರೇಯಸ್ ಪಟೇಲ್ ಅವರು ಹಾಸನ ಜಿಲ್ಲೆಯ ಸದ್ಯದ ರಾಜಕೀಯ ಚಿತ್ರಣವನ್ನು ಉಲ್ಲೇಖಿಸಿದ್ದಾರೆ. ಜಿಲ್ಲೆಯ ಒಟ್ಟು ಏಳು ವಿಧಾನಸಭಾ ಕ್ಷೇತ್ರಗಳ ಪೈಕಿ ಕೆ.ಎಂ. ಶಿವಲಿಂಗೇಗೌಡರು



ಸದ್ಯಕ್ಕೆ ಇರುವ ಏಕೈಕ ಕಾಂಗ್ರೆಸ್ ಶಾಸಕರಾಗಿದ್ದಾರೆ. ಹಾಸನ ಜಿಲ್ಲೆಯಲ್ಲಿ ಎದುರಾದ ಅತ್ಯಂತ ಸವಾಲಿನ ಮತ್ತು ಪ್ರತಿಕೂಲ ರಾಜಕೀಯ ಪರಿಸ್ಥಿತಿಗಳ ನಡುವೆಯೂ, ಶಿವಲಿಂಗೇಗೌಡರು ತಳಮಟ್ಟದಲ್ಲಿ ಪಕ್ಷವನ್ನು ಸಂಘಟಿಸಿ, ಕಾರ್ಯಕರ್ತರು ಮತ್ತು ಸಾರ್ವಜನಿಕರ ಬೆಂಬಲವನ್ನು ಕ್ರೋಢೀಕರಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ ಎಂದು ಪತ್ರದಲ್ಲಿ ಶ್ಲಾಘಿಸಿದ್ದಾರೆ.

ಜಿಲ್ಲೆಯ ಏಕೈಕ ಕಾಂಗ್ರೆಸ್ ಶಾಸಕರಾಗಿದ್ದರೂ, ತಮ್ಮ ಕಠಿಣ ಪರಿಶ್ರಮ ಮತ್ತು ಪಕ್ಷದ ಮೇಲಿನ ನಿಷ್ಠೆಯಿಂದಾಗಿ ಹಾಸನ ಲೋಕಸಭಾ ಕ್ಷೇತ್ರವನ್ನು ಕಾಂಗ್ರೆಸ್ ಮಡಿಲಿಗೆ ಹಾಕುವಲ್ಲಿ ಅವರು ಯಶಸ್ವಿಯಾಗಿದ್ದಾರೆ ಎಂದು ಸಂಸದರು ನೆನಪಿಸಿದ್ದಾರೆ.

#### ಹಿರಿತನ ಮತ್ತು ವಾಕ್ಚಾತುರ್ಯಕ್ಕೆ ಗೌರವ

ಶಾಸಕ ಶಿವಲಿಂಗೇಗೌಡರ ಸುದೀರ್ಘ ರಾಜಕೀಯ ಅನುಭವ ಮತ್ತು ಅರ್ಹತೆಯನ್ನು ಪತ್ರದಲ್ಲಿ ಪಟ್ಟಿ ಮಾಡಿರುವ ಶ್ರೇಯಸ್ ಪಟೇಲ್:

20 ವರ್ಷಗಳ ಸುದೀರ್ಘ ಪ್ರಾತಿನಿಧ್ಯ: ಶಿವಲಿಂಗೇಗೌಡರು ಸತತವಾಗಿ ಅರಸೀಕೆರೆ ವಿಧಾನಸಭಾ ಕ್ಷೇತ್ರವನ್ನು ಪ್ರತಿನಿಧಿಸುತ್ತಿದ್ದು, ಪ್ರಸ್ತುತ 4ನೇ ಬಾರಿಗೆ ಶಾಸಕರಾಗಿ ಆಯ್ಕೆಯಾಗಿದ್ದಾರೆ. ಇದು ಅವರ ಮೇಲಿರುವ ಜನರ ನಂಬಿಕೆಯನ್ನು ತೋರಿಸುತ್ತದೆ.

ವಿಧಾನಸಭೆಯಲ್ಲಿ ಧ್ವನಿ: ಕರ್ನಾಟಕ ವಿಧಾನಸಭೆಯಲ್ಲಿ ತಮ್ಮ ಅದ್ಭುತ ವಾಕ್ಚಾತುರ್ಯಕ್ಕೆ ಹೆಸರಾಗಿರುವ ಅವರು, ವಿರೋಧ ಪಕ್ಷಗಳ (ಬಿಜೆಪಿ-ಜೆಡಿಎಸ್) ಸಿದ್ಧಾಂತಗಳನ್ನು ಸದಾ ಪ್ರಬಲವಾಗಿ ವಿರೋಧಿಸುತ್ತಾ ಬಂದಿದ್ದಾರೆ. ಜೊತೆಗೆ ಕಾಂಗ್ರೆಸ್ ಪಕ್ಷದ ತತ್ವ ಮತ್ತು ನೀತಿಗಳನ್ನು ಸದನದಲ್ಲಿ ಗಟ್ಟಿಯಾಗಿ ಪ್ರತಿಪಾದಿಸುತ್ತಿದ್ದಾರೆ.

ಚುನಾವಣಾ ಯಶಸ್ಸು : ಹಾಸನ ಜಿಲ್ಲೆಯ ಅಭಿವೃದ್ಧಿಗೆ ಶ್ರಮಿಸುತ್ತಿರುವ ಅವರು, ಸಂಸತ್ ಚುನಾವಣೆಯಲ್ಲೂ ಕಾಂಗ್ರೆಸ್ ಅಭ್ಯರ್ಥಿಯ ಗೆಲುವಿಗೆ ಪ್ರಮುಖ ಕಾರಣಕರ್ತರಾಗಿದ್ದಾರೆ.

#### ಅಭಿವೃದ್ಧಿ ಮತ್ತು ಪಕ್ಷದ ಭವಿಷ್ಯಕ್ಕೆ ಅನಿವಾರ್ಯ

ಶ್ರೀ ಕೆ.ಎಂ. ಶಿವಲಿಂಗೇಗೌಡ ಅವರ ವ್ಯಾಪಕ ರಾಜಕೀಯ ಅನುಭವ, ಹಿರಿತನ, ಸಾಂಸ್ಥಿಕ ಬಲ ಮತ್ತು ಹಾಸನ ಜಿಲ್ಲೆಯ ಅಭಿವೃದ್ಧಿಗೆ ಅವರು ನೀಡುತ್ತಿರುವ ನಿರಂತರ ಕೊಡುಗೆಯನ್ನು ಪರಿಗಣಿಸಿ, ಅವರನ್ನು ಕರ್ನಾಟಕ ಸರ್ಕಾರದಲ್ಲಿ ಸಚಿವರನ್ನಾಗಿ ಮಾಡಲು ಪಕ್ಷದ ನಾಯಕತ್ವವು ಮುಂದಾಗಬೇಕು. ಅವರ ಸೇರ್ಪಡೆಯಿಂದ ಹಾಸನ ಜಿಲ್ಲೆಯಲ್ಲಿ ಅಭಿವೃದ್ಧಿ ಕಾಮಗಾರಿಗಳು ವೇಗಗೊಳ್ಳಲಿವೆ ಹಾಗೂ ಜಿಲ್ಲೆಯಲ್ಲಿ ಕಾಂಗ್ರೆಸ್ ಪಕ್ಷ ಮತ್ತಷ್ಟು ಗಟ್ಟಿಯಾಗಲಿದೆ, ಎಂದು ಶ್ರೇಯಸ್ ಪಟೇಲ್ ಪತ್ರದಲ್ಲಿ ವಿನಂತಿಸಿದ್ದಾರೆ.

ಹಾಸನದಲ್ಲಿ ಜೆಡಿಎಸ್ ಹಾಗೂ ಬಿಜೆಪಿಗೆ ಬಲವಾದ ಟಕ್ಕರ್ ನೀಡಲು ಶಿವಲಿಂಗೇಗೌಡರಂತಹ ಹಿರಿಯ ನಾಯಕರಿಗೆ ಸಚಿವ ಸ್ಥಾನ ನೀಡುವುದು ಅಗತ್ಯ ಎಂಬ ಚರ್ಚೆ ಈಗ ರಾಜಕೀಯ ವಲಯದಲ್ಲಿ ಮುನ್ನೆಲೆಗೆ ಬಂದಿದ್ದು, ಕಾಂಗ್ರೆಸ್ ಹೈಕಮಾಂಡ್ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈ ಮನವಿಗೆ ಹೇಗೆ ಸ್ಪಂದಿಸಲಿದ್ದಾರೆ ಎಂಬುದನ್ನು ಕಾದು ನೋಡಬೇಕಿದೆ.

# ಪತ್ರಿಕಾ ವಿತರಕರ ಪ್ರೀಮಿಯರ್ ಲೀಗ್ ಮೇ 31ಕ್ಕೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಹಾಸನಾಂಬ ಜಿಲ್ಲಾ ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸಂಘದಿಂದ ಇದೇ ಮೊದಲ ಬಾರಿಗೆ ಪತ್ರಿಕಾ ವಿತರಕರ ಪ್ರೀಮಿಯರ್ ಲೀಗ್ ಸೌಹಾರ್ದ ಕ್ರಿಕೆಟ್ ಪಂದ್ಯಾವಳಿ ಮೇ 31 ರಂದು ನಗರದ ಸರ್ಕಾರಿ ಕಲಾ ಕಾಲೇಜು ಮೈದಾನದಲ್ಲಿ ನಡೆಯಲಿದೆ ಎಂದು ಸಂಘದ ಕಿರಣ್ ಮತ್ತು ಸುನಿಲ್ ತಿಳಿಸಿದರು.

ಇಂದು ಸುದ್ದಿಗೋಷ್ಟಿಯಲ್ಲಿ ಈ ವಿಷಯ ತಿಳಿಸಿದ ಅವರು, ಅಂದು ಬೆಳಗ್ಗೆ ಸ್ಥಳೀಯ ಶಾಸಕ ಹೆಚ್.ಪಿ.ಸ್ವರೂಪ್ ಪ್ರಕಾಶ್ ಉದ್ಘಾಟನೆ ನೆರವೇರಿಸುವರು. ಕ್ರೀಡಾಕೂಟಕ್ಕೆ ಕೆಯುಡಬ್ಲ್ಯೂಜೆ ಉಪಾಧ್ಯಕ್ಷ ಹೆಚ್.ಬಿ.ಮದನಗೌಡ, ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಜೆ.ಆರ್.ಕೆಂಚೇಗೌಡ, ಮಾಜಿ ಅಧ್ಯಕ್ಷರಾದ ಬಾಳ್ಳುಗೋಪಾಲ್, ಹಲೋಹಾಸನ್ ಪತ್ರಿಕೆ ಸಂಪಾದಕ ರವಿ ನಾಕಲಗೂಡು ಕ್ರೀಡಾಕೂಟಕ್ಕೆ ಚಾಲನೆ ನೀಡುವರು ಎಂದರು.

ಹಾಸನವಾಣಿ ಸಂಪಾದಕರಾದ ಲೀಲಾವತಿ ಆಶಯ ನುಡಿಗಳನ್ನು ಆಡಲಿದ್ದು, ಜನಮಿತ್ರ




ಸಂಪಾದಕ ಸಿ.ಆರ್.ನವೀನ್ ದಿಕ್ಸೂಚಿ ಮಾತುಗಳನ್ನಾಡುವರು. ಭೀಮವಿಜಯ ಸಂಪಾದಕ ನಾಗರಾಜ್ ಹೆತ್ತೂರು ತಂಡಗಳ ಪರಿಚಯ ಮಾಡಲಿದ್ದಾರೆ ಎಂದರು.

ವಿಶೇಷ ಆಹ್ವಾನಿತರಾಗಿ ಸಂಪಾದಕರಾದ ಕೆ.ಹೆಚ್.ವೇಣುಕುಮಾರ್, ಅನಂತೇಗೌಡ, ಜಗದೀಶ್ ಚೌಡುವಳ್ಳಿ, ಚಲಂ ಹಾಡ್ಲಹಳ್ಳಿ, ಸ್ವಾಗತ್ ಹೆಚ್.ಎಸ್. ರಘುನಂದನ್, ಈಶ್ವರ ಎ.ಎನ್. ಬಿಜೆಪಿ ಯುವ ಮುಖಂಡರಾದ ಪುನೀತ್ ಪ್ರದೀಪ್ ಆಗಮಿಸುವರು ಎಂದರು.

ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಂ ಜೆ.ಗೌಡ, ಕಾರ್ಮಿಕ ನಿರೀಕ್ಷಕ ಆನಂದ್ ರಾವ್, ಪತ್ರಿಕಾ ವಿತರಕರಿಗೆ ಸನ್ಮಾನ ಮಾಡುವರು.

ಬಹುಮಾನ ಪ್ರಾಯೋಜಕರಾದ ಕಾಂಗ್ರೆಸ್ ಮುಖಂಡರಾದ ಚಂದ್ರಶೇಖರ್ ಡಿ.ಪಿ. ಪ್ರಜಾವಾಣಿ, ಜನತಾಮಾಧ್ಯಮ, ಜನಮಿತ್ರ, ಹಲೋಹಾಸನ್ ಸಂಪಾದಕರು, ಕ್ವಾಲಿಟಿ ಬಾರ್ ಮಾಲೀಕರಾದ ಶರತ್ ಬಿ.ಪಿ. ಚನ್ನರಾಯಪಟ್ಟಣ ತಾಲೂಕು ಕಸಾಪ ಘಟಕದ ಅಧ್ಯಕ್ಷ ಲೋಕೇಶ್ ಬಹುಮಾನ ವಿತರಿಸುವರು ಎಂದು ಮಾಹಿತಿ ನೀಡಿದರು.

ಪ್ರಥಮ ಬಹುಮಾನ 20 ಸಾವಿರ, ದ್ವಿತೀಯ 15, ತೃತೀಯ 10, ನಾಲ್ಕನೇ 10 ಮತ್ತು 5ನೇ ಬಹುಮಾನವಾಗಿ 5 ಸಾವಿರ ಬಹುಮಾನ ನೀಡಲಾಗುವುದು. ಶಾಸಕ ಸ್ವರೂಪ್ ಪ್ರಕಾಶ್ ಅವರು ಪ್ರಶಸ್ತಿ ಮತ್ತು ಪದಕ ನೀಡಿದ್ದು, ಜೆ.ಆರ್. ಕೆಂಚೇಗೌಡ ಮತ್ತು ಬಾಳ್ಳುಗೋಪಾಲ್ ಅವರು ಸಮವಸ್ತ್ರ ಕೊಡಿಸಿದ್ದಾರೆ ಎಂದರು. ಉಪಹಾರ ಮತ್ತು ಊಟದ ವ್ಯವಸ್ಥೆಯನ್ನು ಪುನೀತ್ ರಾಜ್‌ಕುಮಾರ್ ಅಭಿಮಾನಿಗಳ ಸಂಘದ ಗೌರಿ ಕುಮಾರಿ ನೀಡಿದ್ದಾರೆ ಎಂದರು.

ಪಂದ್ಯಾವಳಿಯಲ್ಲಿ ರ್‍ಯಾಬಿಟ್ ರನ್ ರೈಡರ್ಸ್, ಹಾಸನ ವಾರಿಯರ್ಸ್, ಕರಿ ಚಿರತೆ ಚಾಲೆಂಜರ್ಸ್, ಲಯನ್ ಕ್ಯಾಪಿಟಲ್ಸ್ ಮತ್ತು ವಿಕ್ಟರಿ ಫೋರ್ಸ್ ಸೇರಿ ಐದು ತಂಡಗಳು ಭಾಗಿಯಾಗಲಿವೆ. ಇಷ್ಟೂ ತಂಡಗಳಲ್ಲಿ ವಿತರಕರು ಪಾಲ್ಗೊಳ್ಳಲಿದ್ದಾರೆ ಎಂದರು.

ಸುದ್ದಿಗೋಷ್ಟಿಯಲ್ಲಿ ಸುರೇಶ್, ಚೇತನ್, ಶ್ರೀಕಾಂತ್, ದಿನೇಶ್ ಇದ್ದರು.

## ಮೂವರು ನಾಯಕರು ಮಾತು ಕೊಟ್ಟಿದ್ದಾರೆ

# ಮಂತ್ರಿ ಆಗುವ ಆಸೆಯಿದೆ: ಶಿವಲಿಂಗೇಗೌಡ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ರಾಜ್ಯ ಕಾಂಗ್ರೆಸ್ ಸರ್ಕಾರದ ನೂತನ ಸಚಿವ ಸಂಪುಟದಲ್ಲಿ ಸಚಿವರಾಗಬೇಕು ಎಂದು ಹಲವು ಶಾಸಕರು, ಮಾಜಿ ಸಚಿವರು ದೆಹಲಿಗೆ ದೌಡಾಯಿಸಿದ್ದಾರೆ.

ಅಂತೆಯೇ ಕರ್ನಾಟಕ ಗೃಹ ಮಂಡಳಿ ಅಧ್ಯಕ್ಷರೂ ಆಗಿರುವ ಅರಸೀಕೆರೆ ಶಾಸಕ ಕೆ.ಎಂ.ಶಿವಲಿಂಗೇಗೌಡ ಅವರೂ ಸಹ, ದೆಹಲಿ ಪ್ರವಾಸ ಕೈಗೊಂಡಿದ್ದಾರೆ.

ಏನಾದರೂ ಸರಿ ನಾನೂ ಮಂತ್ರಿಯಾಗಬೇಕು ಎಂದು ಪಣ ತೊಟ್ಟಿರುವ ಶಿವಲಿಂಗೇಗೌಡ, ಈ ಸಂಬಂಧ ತಮ್ಮ ಆಪ್ತ ನಾಯಕರ ಮೂಲಕ ಹೈಕಮಾಂಡ್ ಮತ್ತು ಹಿರಿಯ ನಾಯಕರ ಮೂಲಕ ಒತ್ತಡ ಹೇರುವ ಕೆಲಸವನ್ನು ಶಿವಲಿಂಗೇಗೌಡ ಮಾಡುತ್ತಿದ್ದಾರೆ.

ಈ ವೇಳೆ ನವದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಿದ್ದರಾಮಯ್ಯ ಅವರು ರಾಜೀನಾಮೆ



ಕೊಡುತ್ತಾರೆ ಎಂದು ನನಗೆ ಗೊತ್ತಿರಲಿಲ್ಲ. ಹೈಕಮಾಂಡ್ ಸೂಚನೆ ಮೇರೆಗೆ ಅವರು ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಕೊಟ್ಟ ಮಾತಿಗೆ ತಪ್ಪದ, ನುಡಿದಂತೆ ನಡೆದಿರುವ ಸಿದ್ದರಾಮಯ್ಯ ಅವರು ಒಬ್ಬ ಐತಿಹಾಸಿಕ ನಾಯಕ ಎಂದು ಗುಣಗಾನ ಮಾಡಿದರು.

ಹಾಗೆಯೇ ಹೈಕಮಾಂಡ್ ಸಹ ಅವರನ್ನು ನಡೆಸಿಕೊಂಡಿದೆ ಎಂದ ಅವರು, ನೂತನ ಸಚಿವ ಸಂಪುಟದಲ್ಲಿ ಮಂತ್ರಿ ಆಗುವ ಆಸೆ ಇಟ್ಟುಕೊಂಡಿದ್ದೇನೆ ಎಂದು ತಮ್ಮ ಅಂತರಂಗ ಬಹಿರಂಗ ಪಡಿಸಿದರು.

ನಾನು ಸಚಿವ ಸ್ಥಾನದ ಆಕಾಂಕ್ಷಿ ಅಲ್ಲ ಎಂದರೆ ಆತ್ಮವಂಚನೆ ಆಗಲಿದೆ. ನಾನು ಒಟ್ಟು ನಾಲ್ಕು ಬಾರಿ ಶಾಸಕನಾಗಿದ್ದೇನೆ. ಜೆಡಿಎಸ್‌ನಿಂದ ಕಾಂಗ್ರೆಸ್‌ಗೆ ಬಂದ ನಂತರವೂ ಗೆಲುವು ಸಾಧಿಸಿದ್ದೇನೆ. 2023 ರಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರಲಿದೆ ಎಂಬ ಆಸೆಯಿಂದಲೇ ಈ ಪಕ್ಷಕ್ಕೆ ಬಂದಿದ್ದೇನೆ.

ನಾನು ಕಾಂಗ್ರೆಸ್‌ಗೆ ಬರುವಾಗ ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್ ಮತ್ತು ಕರ್ನಾಟಕ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಸೇರಿ ಮೂವರು ನಾಯಕರು ನಿನ್ನನ್ನು ಮಂತ್ರಿ ಮಾಡುತ್ತೇವೆ ಎಂದು ಮಾತು ಕೊಟ್ಟಿದ್ದಾರೆ.

ಮೊದಲ ಅವಧಿಯಲ್ಲಿ ಆ ಅವಕಾಶ ಸಿಗಲಿಲ್ಲ. ಈ ಬಾರಿ ಸಚಿವ ಸ್ಥಾನ ಸಿಗುವ ವಿಶ್ವಾಸವಿದೆ ಎಂದರು. ಇದೇ ವೇಳೆ ನಿಮಗೆ ಯಾವ ಖಾತೆ ಬೇಕು ಎಂಬ ಪ್ರಶ್ನೆಗೆ ಮೊದಲು ಮಂತ್ರಿ ಮಾಡಲಿ, ನಂತರ ಖಾತೆ ಯಾವುದೆಂದು ನೋಡೋಣ ಎಂದರು.

# ಹೆಚ್.ಸಿ.ಶ್ರೀಕಂಠಯ್ಯನವರ ಸ್ಮರಣಾರ್ಥ ರಾಜ್ಯಮಟ್ಟದ ವಾಲಿಬಾಲ್ ಪಂದ್ಯಾವಳಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಜಿಲ್ಲೆಯ ಮೇರು ರಾಜಕಾರಣಿ, ಮಾಜಿ ಸಚಿವ ದಿವಂಗತ ಹೆಚ್.ಸಿ.ಶ್ರೀಕಂಠಯ್ಯನವರ ಜನ್ಮ ಶತಮಾನೋತ್ಸವದ ಅಂಗವಾಗಿ ತಾಲ್ಲೂಕಿನ ಹೆಚ್.ಸಿ.ಶ್ರೀಕಂಠಯ್ಯ ಸೇವಾಸಮಿತಿಯೂ ಜೂನ್ 5 ರಿಂದ 7 ರವರೆಗೆ ರಾಷ್ಟ್ರಮಟ್ಟದ ವಾಲಿಬಾಲ್ ಪಂದ್ಯಾವಳಿಯನ್ನು ಆಯೋಜಿಸಲಾಗಿದೆ ಎಂದು ಸೇವಾಸಮಿತಿ ಅಧ್ಯಕ್ಷ ವಿ.ಎನ್. ಅಶೋಕ್ ಹೇಳಿದರು.

ಪಟ್ಟಣದ ದಿ.ಹೆಚ್.ಸಿ.ಶ್ರೀಕಂಠಯ್ಯ ಸಭಾಂಗಣದಲ್ಲಿ ವಾಲಿಬಾಲ್ ಪಂದ್ಯಾವಳಿ ಕುರಿತಾಗಿ ನಡೆದ ಸೇವಾಸಮಿತಿ ಸದಸ್ಯರು ಮತ್ತು ಕಾರ್ಯಕರ್ತರ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯ ಕಂಡ ಧೀಮಂತ ನಾಯಕ, ಸಹಕಾರ ಬಂಧು ಮಾಜಿ ಸಚಿವ ಹೆಚ್.ಸಿ.ಶ್ರೀಕಂಠಯ್ಯನವರ 100ನೇ ವರ್ಷದ ಜನ್ಮದಿನಾಚರಣೆಯನ್ನು ತಾಲ್ಲೂಕಿನಲ್ಲಿ ಸ್ಮರಣೀಯವಾಗಿ ಆಚರಿಸುವ ನಿರ್ಧಾರವನ್ನು ಅವರ ಕುಟುಂಬವರ್ಗ ಮತ್ತು ಶ್ರೀಕಂಠಯ್ಯನವರ ಅನುಯಾಯಿಗಳು,




ಕಾರ್ಯಕರ್ತರು ಮಾಡಿದ್ದು, ಜುಲೈ 18ರಂದು ಆಚರಣೆಗೆ ಸಕಲ ಸಿದ್ದತೆಯನ್ನು ಮಾಡಿಕೊಳ್ಳಲಾಗಿದೆ. ಇದರ ಸಲುವಾಗಿ ಶ್ರೀಕಂಠಯ್ಯನವರ ಮೊಮ್ಮಗ ಕರ್ನಾಟಕ ವಿದ್ಯುತ್ ಶಕ್ತಿ ಕಾರ್ಖಾನೆಯ ಅಧ್ಯಕ್ಷ ಹೆಚ್.ಸಿ.ಲಲಿತ್ ರಾಘವ್ ರವರು ಈಗಾಗಲೇ ತಮ್ಮ ತಾತನ ಸ್ಮರಣಾರ್ಥ ಹತ್ತಾರು ಸಮಾಜಮುಖಿ ಕಾರ್ಯಕ್ರಮಗಳನ್ನು ಆಯೋಜನೆ ಮಾಡಿದ್ದಾರೆ. ತಾಲ್ಲೂಕಿನ ವಿದ್ಯಾವಂತ ನಿರುದ್ಯೋಗಿಗಳು ಕೆಲಸ ಪಡೆಯಲು ನೆರವಾಗಲು, 2ಸಾವಿರ ಯುವಕರಿಗೆ ಕೌಶಲ್ಯ ತರಬೇತಿ, ಇಂಗ್ಲೀಷ್ ಸ್ಪೀಕಿಂಗ್ ಕೋರ್ಸ್, ಕಂಪ್ಯೂಟರ್ ಕಲಿಕೆಯಂತಹ ತರಬೇತಿ ಕಾರ್ಯಕ್ರಮಗಳು, ಮಹಿಳೆಯರು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಗುಡಿಕೈಗಾರಿಕೆಗಳ ತರಬೇತಿ, ಆರ್ಥಿಕ ನೆರವು ನೀಡುವ ಕೆಲಸ ಮಾಡುತ್ತಿದ್ದಾರೆ ಎಂದರು.

ಜೂನ್ 5 ರಿಂದ 7ರವರೆಗೆ ಮೂರು ದಿನಗಳು ರಾಷ್ಟ್ರಮಟ್ಟದ ವಾಲಿಬಾಲ್ ಪಂದ್ಯಾವಳಿ ಅಣ್ಣಯ್ಯ ಕಪ್‌ನ್ನು ಪಟ್ಟಣದ ಮಾಧ್ಯಮಿಕ ಶಾಲಾ ಆವರಣದಲ್ಲಿ ಆಯೋಜಿಸಿದ್ದು, ಪಂದ್ಯಾವಳಿಯ ಆಯೋಜನೆಯ ರೂಪರೇಷೆಗಳನ್ನು ಕವಿಕಾ ಅಧ್ಯಕ್ಷರಾದ ಹೆಚ್.ಸಿ.ಲಲಿತ್‌ರಾಘವ್‌ರವರ ಸಲಹೆ, ಸೂಚನೆ ಮೇರೆಗೆ ನಡೆಸಿದ್ದು, ತಂಡಗಳ ಜರ್ಸಿ ಅನಾವರಣಗೊಳಿಸಲಾಗಿದೆ ಎಂದರು.

ಸೇವಾಸಮಿತಿ ನಿರ್ದೇಶಕ, ತಾಲ್ಲೂಕು ಗ್ಯಾರಂಟಿ ಸಮಿತಿ ಸದಸ್ಯ ಮಿಲ್ಟ್ರಿಮಂಜು ಮಾತನಾಡಿ, ಹೆಚ್.ಸಿ.ಶ್ರೀಕಂಠಯ್ಯನವರ ಹೆಸರಿನಲ್ಲಿ ಅಣ್ಣಯ್ಯ ಕಪ್ ಎಂಬ ವಾಲಿಬಾಲ್ ಪಂದ್ಯಾವಳಿಗೆ ದೇಶದ ಹಲವು ರಾಜ್ಯಗಳಿಂದ ಆಯ್ದ ಅತ್ಯುತ್ತಮ ತಂಡಗಳು ಭಾಗಿಯಾಗಲಿವೆ. ಹೊನಲು ಬೆಳಕಿನ ಪಂದ್ಯಾವಳಿಯಾಗಿದ್ದು, ಮೊದಲನೇ ಬಹುಮಾನವಾಗಿ 1.5 ಲಕ್ಷ ರೂ. ದ್ವಿತೀಯ ಬಹುಮಾನವನ್ನು 1.4 ಲಕ್ಷ ರೂ, ತೃತೀಯ ಬಹುಮಾನವಾಗಿ 1.3 ಲಕ್ಷ ರೂ ಮತ್ತು ನಾಲ್ಕನೇ ಬಹುಮಾನವಾಗಿ 1.20 ಲಕ್ಷ ರೂ. ನೀಡಲಿದ್ದೇವೆ ಎಂದರು.

ಈ ವೇಳೆ ಹೆಚ್.ಸಿ.ಶ್ರೀಕಂಠಯ್ಯ ಸೇವಾಸಮಿತಿ ಪದಾಧಿಕಾರಿಗಳಾದ ಹೆಚ್.ಜಿ.ಮಂಜೇಗೌಡ, ಗೋವಿಂದ್ ರಾಜು, ಆಗ್ರಹಾರ ಗಿರೀಶ್, ಹೆಚ್.ಎಂ.ಜಯರಾಮ್, ಸಿ.ಟಿ.ರಮೇಶ್, ಶಿವಸ್ವಾಮಿ, ವಿಶ್ವನಾಥ್, ಸಿ.ಟಿ.ಅಶೋಕ್ ಕುಮಾರ್, ಸುಜಾತ, ಉಮಾಶಂಕರ್, ಕೆ.ಜಿ.ಬಾಬು. ಗನ್ನಿ ಗಿರೀಶ್, ರುದ್ರೇಶ್ ಸೇರಿ ಇತರರು ಇದ್ದರು.

# ಸತೀಶ್ ಜಾರಕಿಹೊಳಿಗೆ ಕೆಪಿಸಿಸಿ ಪಟ್ಟ ಪಕ್ಕಾ..?

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೆಂಗಳೂರು: ಹಾಲಿ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಸಿಎಂ ಆದ ನಂತರ ನಂತರ ಅವರ ಸ್ಥಾನಕ್ಕೆ ಬೆಳಗಾವಿ ಸಾಹುಕಾರ್ ಸತೀಶ್ ಜಾರಕಿಹೊಳಿ ಅವರ ಹೆಸರು ಮೊದಲಿಗೆ ಕೇಳಿ ಬರುತ್ತಿದೆ.

ಕೆಪಿಸಿಸಿಗೆ ಹೊಸ ಸಾರಥಿಯಾಗಿ ಸತೀಶ್ ಹೆಸರು ಅಧಿಕೃತವಾಗಿ ಘೋಷಣೆ ಆಗಿಲ್ಲ. ಆದರೆ ಎಐಸಿಸಿ ಪ್ರಧಾನ ಕಾರ್ಯದರ್ಶಿ ವೇಣುಗೋಪಾಲ್ ಈ ಸಂಬಂಧ ಈಗಾಗಲೇ ಚರ್ಚೆ ನಡೆಸಿದ್ದಾರೆ ಎನ್ನಲಾಗಿದೆ.

ಸದ್ಯ ಕೆಪಿಸಿಸಿಗೆ ಬೇರಾವ ಹೆಸರುಗಳು ಚಾಲ್ತಿಯಲ್ಲಿಲ್ಲ, ಬದಲಾಗಿ ಸತೀಶ್ ಜಾರಕಿಹೊಳಿ ಹೆಸರು ಮುಂಚೂಣಿಯಲ್ಲಿದೆ.

ಹೈಕಮಾಂಡ್ ಮಣೆ ಸಾಧ್ಯತೆ: ಕೆಪಿಸಿಸಿಗೆ ಬಹುತೇಕ ಸತೀಶ್ ಜಾರಕಿಹೊಳಿ ಹೆಸರೇ ಅಂತಿಮವಾಗಲಿದೆ. ಇದಕ್ಕೆ ಹಲವು ಕಾರಣಗಳಿವೆ. ಅಹಿಂದ ವರ್ಗದ ನಾಯಕ ಸಿದ್ದರಾಮಯ್ಯ ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡುತ್ತಿರುವ ಹಿನ್ನೆಲೆಯಲ್ಲಿ ಅಹಿಂದ ವರ್ಗಕ್ಕೆ ಅನ್ಯಾಯ ಆಗಿದೆ ಎಂಬ ಅಭಿಪ್ರಾಯ ಮೂಡುತ್ತಿದೆ. ಇದಕ್ಕೆ ಪರ್ಯಾಯ ವ್ಯವಸ್ಥೆ ಮಾಡಬೇಕಾಗಿದೆ. ಹಾಗಾಗಿ ಕೆಪಿಸಿಸಿಯೇ ಮುಂದಿರುವ ಆಯ್ಕೆಯಾಗಿದೆ.

ಸತೀಶ್ ಜಾರಕಿಹೊಳಿ ಎಸ್‌ಟಿ ಸಮುದಾಯಕ್ಕೆ ಸೇರಿದವರಾಗಿದ್ದಾರೆ. ಹಾಗಾಗಿ



ಎಸ್ ಟಿ ಸಮುದಾಯದ ಮತಗಳನ್ನು ಸೆಳೆಯಬೇಕಾಗಿದೆ. ಜೊತೆಗೆ ಕೆಪಿಸಿಸಿ ಅಧ್ಯಕ್ಷರಾದವರು ಮುಂದಿನ ಸಿಎಂ ಆಗುತ್ತಾರೆ ಎಂಬ ಅಭಿಪ್ರಾಯವೂ ಇದೆ. ಜೊತೆಗೆ ಅಹಿಂದ ವರ್ಗಕ್ಕೆ ಹೊಸ ನಾಯಕನ ಅಗತ್ಯ ಇದೆ. ಸಿದ್ದರಾಮಯ್ಯ ಅವರ ನಿರ್ಗಮನದ ಬಳಿಕ ಅಹಿಂದಕ್ಕೆ ಬಲ ತುಂಬುವ ಸಾಮರ್ಥ್ಯ ಸತೀಶ್ ಜಾರಕಿಹೊಳಿ ಅವರಿಗೆ ಇದೆ.

ಈ ನಿಟ್ಟಿನಲ್ಲಿ ಹೈಕಮಾಂಡ್ ಆಯ್ಕೆ ಸತೀಶ್ ಜಾರಕಿಹೊಳಿ ಆಗುವ ಸಾಧ್ಯತೆ ದಟ್ಟವಾಗಿದೆ. ಸದ್ಯದ ಬೆಳವಣಿಗೆ, ಗೊಂದಲಗಳೆಲ್ಲವೂ ಬಗೆಹರಿದ ಬೆನ್ನಲ್ಲೇ ಕೆಪಿಸಿಸಿ ಅಧ್ಯಕ್ಷ ಸ್ಥಾನದ ವಿಚಾರವಾಗಿ ಹೈಕಮಾಂಡ್ ತನ್ನ ನಿಲುವು ಪ್ರಕಟಿಸಲಿದೆ. ಒಂದು ವೇಳೆ ಸತೀಶ್ ಜಾರಕಿಹೊಳಿಗೆ ಪಟ್ಟ ಕಟ್ಟಿದಲ್ಲಿ ರಾಜ್ಯ ಕಾಂಗ್ರೆಸ್ ಚಹರೆಯಲ್ಲಿ ಒಂದಿಷ್ಟು ಬದಲಾವಣೆಗಳು ಕಾಣುವ ಸಾಧ್ಯತೆ ಇದೆ.

ಸಂಘಟನೆಯಲ್ಲಿ ಬದಲಾವಣೆ ಸತೀಶ್ ಜಾರಕಿಹೊಳಿ ಸಂಘಟನೆಯಲ್ಲಿ ಚತುರರು. ಅಲ್ಲದೆ, ಅವರ ಹಿಂದೆ ದೊಡ್ಡ ಸಮುದಾಯವೂ ಇದೆ. ಅಹಿಂದ ವರ್ಗದ ಬೆಂಬಲವೂ ಅವರಿಗೆ ಸಿಗಲಿದೆ. ಸೈದ್ಧಾಂತಿಕವಾಗಿಯೂ ಅವರು ಸಿದ್ದರಾಮಯ್ಯ ಅವರ ಮಾರ್ಗವನ್ನು ಅನುಸರಿಸುತ್ತಾ ಬಂದಿದ್ದಾರೆ. ಹಾಗಾಗಿ ಪಕ್ಷದ ಸಂಘಟನೆಯ ಶೈಲಿಯಲ್ಲಿ ಒಂದಿಷ್ಟು ಬದಲಾವಣೆ ಅಗುವ ಸಾಧ್ಯತೆ ಅಲ್ಲಗಳೆಯುವ ಹಾಗಿಲ್ಲ.

ಸತೀಶ್ ಜಾರಕಿಹೊಳಿ ಮಾನವ ಬಂಧುತ್ವ ವೇದಿಕೆಯ ಮೂಲಕ ರಾಜ್ಯಾದ್ಯಂತ ಸಂಘಟನೆಯ ಹಿಡಿತ ಹೊಂದಿದ್ದಾರೆ. ಕಾಂಗ್ರೆಸ್ ಪಕ್ಷಕ್ಕೆ ಕೇಡರ್ ಸ್ವರೂಪ ನೀಡಲು ಪ್ರಯತ್ನ ನಡೆಸಿದವರಲ್ಲಿ ಇವರೂ ಒಬ್ಬರಾಗಿದ್ದಾರೆ.

ಸೌಮ್ಯ ಸ್ವಭಾವದ ಮೂಲಕವೇ ಅವರು ಸಂಘಟನೆಯಲ್ಲಿ ತೊಡಗಿಸಿಕೊಂಡಿದ್ದಾರೆ. ಹೀಗಾಗಿ ಕೆಪಿಸಿಸಿ ಸಾರಥ್ಯ ವಹಿಸಿಕೊಂಡರೆ ಪಕ್ಷ ಸಂಘಟನೆಯಲ್ಲಿ ಒಂದಿಷ್ಟು ಬದಲಾವಣೆ ಕಾಣುವ ಸಾಧ್ಯತೆ ಇದೆ.

# ಒಂದು ಉತ್ತಮ ಶಾಲೆ ಭವಿಷ್ಯದ ಬೆಳಕಿನ ದಾರಿ!



**ಅಂತೋಣಿ ಮುತ್ತು ವಿ**
**ಶಿಕ್ಷಕರು, 7259675543**

ಒಂದು ಉತ್ತಮ ಶಾಲೆ ಎಂದರೆ ಕೇವಲ ಪಾಠಗಳನ್ನು ಕಲಿಸುವ ಸ್ಥಳವಲ್ಲ;ಅದು ಮಕ್ಕಳ ಜೀವನವನ್ನು ರೂಪಿಸುವ ಪವಿತ್ರ ಕೇಂದ್ರವಾಗಿದೆ.ಆಃಶಾಲೆ ಚೆನ್ನಾಗಿದೆಟಿ ಎಂದು ನಾವು ಹೇಳುವಾಗ,ಅದರ ಹಿಂದೆ ಅನೇಕ ಗುಣಮಟ್ಟದ ಅಂಶಗಳು ಅಡಗಿರುತ್ತವೆ. ಉತ್ತಮ ಶಾಲೆ ಮಕ್ಕಳಿಗೆ ಜ್ಞಾನ ಮಾತ್ರವಲ್ಲ, ಶಿಸ್ತು, ಮೌಲ್ಯಗಳು ಮತ್ತು ಆತ್ಮವಿಶ್ವಾಸವನ್ನು ನೀಡುತ್ತದೆ.

ಒಂದು ಆದರ್ಶ ಶಾಲೆಯಲ್ಲಿ ಅನುಭವಸಂಪನ್ನ ಹಾಗೂ ಸ್ನೇಹಪರ ಶಿಕ್ಷಕರು ಇದ್ದಾರೆ. ಅವರು ವಿದ್ಯಾರ್ಥಿಗಳಲ್ಲಿ ಕುತೂಹಲವನ್ನು ಹೆಚ್ಚಿಸಿ, ಕಲಿಕೆಯನ್ನು ರೋಚಕವಾಗಿಸುತ್ತಾರೆ. ಪಾಠದ ಜೊತೆಗೆ ಕ್ರೀಡೆ, ಸಂಗೀತ,ಕಲಾ ಚಟುವಟಿಕೆಗಳು ಕೂಡ ಸಮನ್ವಯವಾಗಿರುವುದು ಉತ್ತಮ ಶಾಲೆಯ ಲಕ್ಷಣವಾಗಿದೆ.ಇದರಿಂದ ಮಕ್ಕಳ ಸರ್ವಾಂಗೀಣ ಬೆಳವಣಿಗೆ ಸಾಧ್ಯವಾಗುತ್ತದೆ.

ಉತ್ತಮ ಶಾಲೆಯ ವಾತಾವರಣ ಸ್ವಚ್ಛ, ಸುರಕ್ಷಿತ ಮತ್ತು ಪ್ರೇರಣಾದಾಯಕವಾಗಿರುತ್ತದೆ. ವಿದ್ಯಾರ್ಥಿಗಳು ಭಯವಿಲ್ಲದೆ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಳ್ಳಬಹುದು.ಇಲ್ಲಿ ಪ್ರತಿ ವಿದ್ಯಾರ್ಥಿಗೂ ಸಮಾನ ಅವಕಾಶ ನೀಡಲಾಗುತ್ತದೆ. ದುರ್ಬಲ ವಿದ್ಯಾರ್ಥಿಗಳಿಗೆ ವಿಶೇಷ ಗಮನ ನೀಡುವುದು ಸಹ ಉತ್ತಮ ಶಾಲೆಯ ಪ್ರಮುಖ ಗುಣವಾಗಿದೆ.

ಇನ್ನೊಂದು ಪ್ರಮುಖ ಅಂಶ ಎಂದರೆ ಮೌಲ್ಯ ಶಿಕ್ಷಣ.ಸತ್ಯ, ಪ್ರಾಮಾಣಿಕತೆ,ಸಹಕಾರ ಮತ್ತು ಗೌರವವನ್ನು ಕಲಿಸುವ ಶಾಲೆಯೇ ನಿಜವಾದ ಉತ್ತಮ ಶಾಲೆ. ಇಂತಹ ಮೌಲ್ಯಗಳು ಮಕ್ಕಳನ್ನು ಉತ್ತಮ ನಾಗರಿಕರನ್ನಾಗಿ ರೂಪಿಸುತ್ತವೆ.

ತಂತ್ರಜ್ಞಾನವನ್ನು ಸರಿಯಾಗಿ ಬಳಸುವ ಶಾಲೆಗಳು ವಿದ್ಯಾರ್ಥಿಗಳನ್ನು ಆಧುನಿಕ ಜಗತ್ತಿಗೆ ಸಿದ್ಧಗೊಳಿಸುತ್ತವೆ. ಸ್ಮಾರ್ಟ್ ಕ್ಲಾಸ್,ಡಿಜಿಟಲ್ ಲರ್ನಿಂಗ್ ಮತ್ತು ಪ್ರಯೋಗಾತ್ಮಕ ಕಲಿಕೆಗಳು ವಿದ್ಯಾರ್ಥಿಗಳ ಜ್ಞಾನವನ್ನು ವಿಸ್ತರಿಸುತ್ತವೆ.ಕೊನೆಗೆ ಹೇಳಬೇಕಾದರೆ,

ಉತ್ತಮ ಶಾಲೆ ಎಂದರೆ ಜ್ಞಾನ, ಮೌಲ್ಯ ಮತ್ತು ವ್ಯಕ್ತಿತ್ವದ ಸಮತೋಲನವನ್ನು ನೀಡುವ ಸ್ಥಳ.ಇಂತಹ ಶಾಲೆಗಳು ದೇಶದ ಭವಿಷ್ಯವನ್ನು ಬೆಳಗಿಸುತ್ತವೆ ಮತ್ತು ಉತ್ತಮ ಸಮಾಜ ನಿರ್ಮಾಣಕ್ಕೆ ಸಹಾಯ ಮಾಡುತ್ತವೆ.

# ಪೈಪ್‌ಲೈನ್‌ನಲ್ಲಿ ಭಾರೀ ಸೋರಿಕೆ - ಹಲವು ಬಡಾವಣೆಗಳಲ್ಲಿ ಮೇ 30 ಕ್ಕೆ ಕಾವೇರಿ ನೀರು ಬಂದ್!

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೆಂಗಳೂರು: ಬೆಂಗಳೂರು ಜಲಮಂಡಳಿಯ ಕಾವೇರಿ 2 ನೇ ಹಂತದ ಪೈಪ್‌ಲೈನ್ ತುರ್ತು ದುರಸ್ತಿ ಕಾಮಗಾರಿ ನಡೆಯುತ್ತಿದ್ದು, ಹಲವು ಪ್ರದೇಶಗಳಲ್ಲಿ ಶನಿವಾರ (ಮೇ 30) ನೀರು ಸರಬರಾಜುವಿನಲ್ಲಿ ವ್ಯತ್ಯಯ ಉಂಟಾಗಲಿದೆ.

ಈ ಬಗ್ಗೆ ಬೆಂಗಳೂರು ಜಲಮಂಡಳಿ ಅಧ್ಯಕ್ಷರಾದ ಡಾ. ರಾಮ್ ಪ್ರಸಾತ್ ಮನೋಹರ್ ಮಾಹಿತಿ ಹಂಚಿಕೊಂಡಿದ್ದಾರೆ. ಕಾವೇರಿ 2ನೇ ಹಂತದ 600 ಮಿಮೀ ವ್ಯಾಸದ ಮುಖ್ಯ ಕುಡಿಯುವ ನೀರಿನ ಕೊಳವೆಯಲ್ಲಿ ಉಂಟಾಗಿರುವ ಭಾರೀ ಸೋರಿಕೆಯನ್ನು ತಡೆಗಟ್ಟಲು ಬೆಂಗಳೂರು ಜಲಮಂಡಳಿಯು ತುರ್ತು ದುರಸ್ತಿ




ಕಾಮಗಾರಿಯನ್ನು ಕೈಗೆತ್ತಿಕೊಳ್ಳುತ್ತಿದೆ. ಈ ಹಿನ್ನೆಲೆಯಲ್ಲಿ ಮೈಸೂರು ರಸ್ತೆ ಸೇವಾ ವ್ಯಾಪ್ತಿಯ ಹಲವು ಪ್ರದೇಶಗಳಲ್ಲಿ ನೀರು ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ ಎಂದು ತಿಳಿಸಿದ್ದಾರೆ.

ಮೇ 30ರಂದು ಬೆಳಗ್ಗೆ 9ಕ್ಕೆ ಕಾಮಗಾರಿಯನ್ನು ಜಲಮಂಡಳಿ ಕೈಗೆತ್ತಿಕೊಳ್ಳಲಿದೆ. ಈ ಹಿನ್ನೆಲೆಯಲ್ಲಿ ದುರಸ್ತಿ ಕಾಮಗಾರಿ ಮುಗಿಯುವವರೆಗೆ (8 ಗಂಟೆಗಳ ಕಾಲ) ಮೈಸೂರು ರಸ್ತೆ ಸೇವಾ ವ್ಯಾಪ್ತಿಯ ಹಲವು ಪ್ರದೇಶಗಳಲ್ಲಿ ನೀರು ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ.

ಸೌತ್ ಎಂಡ್ ವೃತ್ತದ ಮುಖಾಂತರ ಮೈಸೂರು ರಸ್ತೆ ಸೇವಾ ಪ್ರದೇಶಗಳಿಗೆ ಪ್ರತಿನಿತ್ಯ 14 ದಶಲಕ್ಷ ಲೀ ನೀರು ಸರಬರಾಜು ಮಾಡುವ ಪೈಪ್‌ಲೈನ್ ರಸ್ತೆಯ (ಹನುಮಂತನಗರ ಪೊಲೀಸ್ ಕ್ವಾರ್ಟರ್ಸ್ ಎದುರು) ಮುಖ್ಯ ಕೊಳವೆಯಲ್ಲಿ ರಂಧ್ರ ಉಂಟಾಗಿ, ಹೆಚ್ಚಿನ ಒತ್ತಡದಲ್ಲಿ ನೀರು ಚಿಮ್ಮುತ್ತಿದೆ. ಇದರಿಂದ ಅಪಾರ ಪ್ರಮಾಣದ ಶುದ್ಧ ಕುಡಿಯುವ ನೀರು ಪೋಲಾಗುವುದರ ಜೊತೆಗೆ, ರಸ್ತೆಯಲ್ಲಿ ಸಂಚರಿಸುವ ದ್ವಿಚಕ್ರ ವಾಹನ ಸವಾರರು ಹಾಗೂ ಪಾದಚಾರಿಗಳಿಗೂ ತೀವ್ರ ತೊಂದರೆಯಾಗುತ್ತಿದೆ.

ಸಾರ್ವಜನಿಕ ಹಿತದೃಷ್ಟಿ ಹಾಗೂ ಅಮೂಲ್ಯವಾದ ನೀರಿನ ಸದ್ಬಳಕೆಯ ಉದ್ದೇಶದಿಂದ ಸೌತ್ ಎಂಡ್ ರಸ್ತೆಯ ಸುರಾನ ಕಾಲೇಜು ಬಳಿ ಇರುವ 24 ಅಂಗುಲದ ಕವಾಟವನ್ನು (ವಾಲ್ವ್ ) 8 ಗಂಟೆಗಳ ಕಾಲ ಬಂದ್ ಮಾಡಿ ಸಮರೋಪಾದಿಯಲ್ಲಿ ಸೋರಿಕೆ ತಡೆಗಟ್ಟುವ ದುರಸ್ತಿ ಕಾಮಗಾರಿಯನ್ನು ನಡೆಸಲಾಗುವುದು ಎಂದು ಡಾ. ರಾಮ್ ಪ್ರಸಾತ್ ಮನೋಹರ್ ತಿಳಿಸಿದ್ದಾರೆ.

ಈ ತುರ್ತು ಕಾಮಗಾರಿಯಿಂದಾಗಿ ಸಾರ್ವಜನಿಕರಿಗೆ ಆಗುವ ಅನಾನುಕೂಲತೆಗಾಗಿ ಜಲಮಂಡಳಿಯು ವಿಷಾದಿಸುತ್ತದೆ. ಕಾಮಗಾರಿ ಪೂರ್ಣಗೊಂಡ ತಕ್ಷಣವೇ ಈ ಎಲ್ಲಾ ಪ್ರದೇಶಗಳಿಗೆ ಎಂದಿನಂತೆ ಸುಗಮವಾಗಿ ನೀರು ಸರಬರಾಜು ಮಾಡಲಾಗುವುದು. ಸಾರ್ವಜನಿಕರು ಹಾಗೂ ಗ್ರಾಹಕರು ಮಂಡಳಿಯೊಂದಿಗೆ ಸಹಕರಿಸಬೇಕಾಗಿ ವಿನಂತಿಸಲಾಗಿದೆ.

# ವೀರಶೈವ- ಲಿಂಗಾಯತ ಸಮುದಾಯಕ್ಕೆ ಸೂಕ್ತ ಸ್ಥಾನ ಸಿಗಬೇಕು : ಈಶ್ವರ್ ಖಂಡ್ರೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೆಂಗಳೂರು: ವೀರಶೈವ- ಲಿಂಗಾಯತ ಸಮುದಾಯಕ್ಕೆ ಸೂಕ್ತ ಸ್ಥಾನ ಸಿಗಬೇಕು ಹಾಗೂ ನೂತನ ಸಚಿವ ಸಂಪುಟದಲ್ಲಿ ಹೆಚ್ಚಿನ ಪ್ರಾತಿನಿಧ್ಯ ಬೇಕು ಎಂದು ಈಶ್ವರ್ ಖಂಡ್ರೆ ಬೇಡಿಕೆ ಇಟ್ಟಿದ್ದಾರೆ. ಬೆಂಗಳೂರಿನಲ್ಲಿ ಶುಕ್ರವಾರ ಮಾತನಾಡಿದ ಅವರು, ಸಮುದಾಯದ ಪರವಾಗಿ ತಮ್ಮ ಅಭಿಪ್ರಾಯ ಹೊರಹಾಕಿದ್ದಾರೆ.

ನಾನು ಪಕ್ಷದ ನಿಷ್ಠಾವಂತ ಕಾರ್ಯಕರ್ತ. ಪಕ್ಷ ನೀಡುವ ಯಾವುದೇ ಜವಾಬ್ದಾರಿ ನಿಭಾಯಿಸಲು ಸಿದ್ಧನಿದ್ದೇನೆ. ನಾನು ಈ ಹಿಂದೆ ಪೌರಾಡಳಿತ ಸಚಿವನಾಗಿ ಹಲವು ಸುಧಾರಣೆಗಳನ್ನು ತಂದಿದ್ದೆ. ಐದು ವರ್ಷಗಳ ಕಾಲ ಕೆಪಿಸಿಸಿ ಕಾರ್ಯಾಧ್ಯಕ್ಷನಾಗಿ ಪಕ್ಷ ಸಂಘಟನೆಗೆ ಶ್ರಮಿಸಿದ್ದೇನೆ. ವರಿಷ್ಠರು ಕೈಗೊಳ್ಳುವ



ನಿರ್ಧಾರಕ್ಕೆ ತಾವು ಬದ್ಧನಾಗಿದ್ದೇನೆ ಎಂದರು.

ಶನಿವಾರ ಸಂಜೆ ಶಾಸಕಾಂಗ ಪಕ್ಷದ ಸಭೆ ಇದೆ. ಹಾಗಾಗಿ ಬೆಂಗಳೂರಿನಲ್ಲಿರುವಂತೆ ವರಿಷ್ಠರು ತಿಳಿಸಿದ್ದಾರೆ. ಪಕ್ಷ ನಿಷ್ಠರು ಕಾಂಗ್ರೆಸ್ ಪಕ್ಷ ಸದಾ ಗುರುತಿಸಿ ಸ್ಥಾನಮಾನ ನೀಡಿದೆ. ನಾನು ಪ್ರಸ್ತುತ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷನೂ ಆಗಿದ್ದೇನೆ. ತಮ್ಮ ಸಮುದಾಯಕ್ಕೆ ಸೂಕ್ತ ಸ್ಥಾನ ಮಾನ ದೊರಕಬೇಕು. ಹೆಚ್ಚಿನ ಶಾಸಕರಿಗೆ ಸಂಪುಟದಲ್ಲಿ ಪ್ರಾತಿನಿಧ್ಯ ಸಿಗಬೇಕು ಎಂದು ಆಗ್ರಹಿಸಿದರು.

ಕಳೆದ 3 ವರ್ಷಗಳ ಕಾಲ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವನಾಗಿ ಉತ್ತಮ ಕಾರ್ಯ ಮಾಡಿದ್ದೇನೆ. ಇಲಾಖೆಗೆ ಕಾಯಕಲ್ಪ ನೀಡಿ ಹಲವು ಸುಧಾರಣೆ ತಂದ ತೃಪ್ತಿ ನನಗಿದೆ. ಸಿದ್ದರಾಮಯ್ಯನವರು ಸ್ವಇಚ್ಛೆಯಿಂದ ರಾಜೀನಾಮೆ ನೀಡಿರುವುದಾಗಿ ಹೇಳಿದ್ದಾರೆ. ಜೊತೆಗೆ ರಾಜ್ಯ ರಾಜಕಾರಣದಲ್ಲೇ ಇದ್ದು ಪಕ್ಷ ಬೆಳೆಸುವುದಾಗಿ ತಿಳಿಸಿದ್ದಾರೆ ಎಂದರು.

ಕಳೆದ 3 ವರ್ಷಗಳಲ್ಲಿ ಅವರು ಪಂಚ ಗ್ಯಾರಂಟಿಗಳನ್ನು ಜಾರಿ ಮಾಡಿ ಉತ್ತಮವಾಗಿ ಸರ್ಕಾರ ಕೊಟ್ಟಿದ್ದಾರೆ. ಅವರ ಹೆಗಲಿಗೆ ಹೆಗಲು ಕೊಟ್ಟು ಡಿ.ಕೆ. ಶಿವಕುಮಾರ್ ಡಿಸಿಎಂ ಆಗಿ ಉತ್ತಮ ಕಾರ್ಯ ಮಾಡಿದ್ದಾರೆ. ಉಪ ಚುನಾವಣೆಗಳಲ್ಲಿ ಪಕ್ಷ ಜಯಭೇರಿ ಬಾರಿಸಿದೆ. ನಾನೂ ಕೂಡ ಉಪ ಚುನಾವಣೆಗಳಲ್ಲಿ ಪಕ್ಷದ ಪರ ಪ್ರಚಾರ ಮಾಡಿದ್ದೇನೆ. ಕಳೆದ ಸಚಿವ ಸಂಪುಟದಲ್ಲಿದ್ದ ಎಲ್ಲಾ ಸಚಿವರೂ ತಮ್ಮ ಜವಾಬ್ದಾರಿ ನಿಭಾಯಿಸಿದ್ದಾರೆ. ಎಲ್ಲರ ಸಂಘಟಿತ ಪ್ರಯತ್ನದಿಂದ ಪಕ್ಷಕ್ಕೆ ಹೆಚ್ಚಿನ ಬಲ ಬರಲಿದೆ ಎಂದರು.

ದಿನೇಶ್ ಗುಂಡೂರಾವ್ ಮಾತನಾಡಿ, ಸಚಿವ ಸಂಪುಟ ಪುನಾರಚನೆ ವಿಚಾರವನ್ನ ಪಕ್ಷದ ಹೈಕಮಾಂಡ್ ನೋಡಿಕೊಳ್ತಾರೆ. ನಮ್ಮಲ್ಲಿರೋ 136 ಮಂದಿಯೂ ಆಕಾಂಕ್ಷಿಗಳೇ ಕೆಲವರಿಗೆ ಅವಕಾಶ ಆಗತ್ತೆ ಅಷ್ಟೆ. ಪಕ್ಷದ ನಿರ್ಧಾರವನ್ನ ಎಲ್ಲರೂ ಪಾಲಿಸುತ್ತೇವೆ. ಶನಿವಾರ ಶಾಸಕಾಂಗ ಪಕ್ಷದ ಸಭೆ ಇದೆ.ಅಲ್ಲಿ ಮುಂದಿನ ಸಿಎಂ ನಿರ್ಧಾರ ಮಾಡ್ತಾರೆ ಎಂದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248